**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ ಉತ್ತರ ಕನ್ನಡ : ಕಾರವಾರ**

**ಸ್ಪೆಷಲ್ ಕೇಸ್ ನಂ. 3/2010**

**ದೋ.ಸಾ. :37 ಪ್ರಾ.ಸಾ. : 15**

ಸಾಕ್ಷಿಯ ಹೆಸರು : ಕನ್ನಾ

ತಂದೆಯ ಹೆಸರು : ಹನುಮಾ ಬಡಗಿ

ವಯಸ್ಸು : 63 ವರ್ಷ

ಉದ್ಯೋಗ : ಬಡಗಿ ಕೆಲಸ

ವಾಸ : ಕಾನಗೋಡು , ಸಿದ್ದಾಪುರ ತಾಲೂಕು

**ದಿನಾಂಕಃ 02-02-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಿಶೇಷ ಸರಕಾರಿ ಅಭಿಯೋಜಕರಿಂದ**

1. ನಾನು ಕಾನಗೋಡು ಗ್ರಾಮದಲಿಸ್ಲಿಯೇ ಜನಸಿ ಅಲ್ಲಿಯೇ ವಾಸವಿದ್ದೇನೆ. ನ್ಯಾಯಾಲಯದಲ್ಲಿರುವ ಆರೋಪಿ ಪರಿಚಯ ಇದೆ ಕಾರಣ ಅವನು ನನ್ನ ಗ್ರಾಮದವನು ಆಗಿದ್ದಾನೆ. ಆರೋಪಿ ಗ್ರಾಮ ಪಂಚಾಯತಿ ಅಧ್ಯಕ್ಷ ಆಗಿದ್ದ ಎಂದು ಕೇಳಿದ್ದೇನೆ ಆದರೆ ನನಗೆ ಖುದ್ದಾಗಿ ಗೊತ್ತಿಲ್ಲ. ಸರ್ಕಾರಿ ಯೋಜನೆ ಅಡಿಯಲ್ಲಿ ನಮ್ಮ ಗ್ರಾಮದಲ್ಲಿ ಫಲಾನುಭವಿಗಳಿಗೆ ಶೌಚಾಲಯ ನಿರ್ಮಿಸಿಕೊಳ್ಳಲು ಪ್ರತಿ ಫಲಾನುಭವಿಗಳಿಗೆ ರೂ.3000/- ಅನುದಾನ ಮಂಜೂರಾದ ವಿಚಾರ ನನಗೆ ಗೊತ್ತಿಲ್ಲ. ನಾನು ಒಬ್ಬ ಫಲಾನುಭ ಆಗಿದ್ದೆ ಎಂದರೆ ನನಗೆ ಗೊತ್ತಿಲ್ಲ. ಪೋಲಿಸನವರಿಗೆ ನಾನು ಆ ಬಗ್ಗೆ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಮಾನ್ಯ ಅಭಿಯೋಜಕರು ಅನುಮತಿಯನ್ನು ಕೇಳುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಗಮನಿಸಿ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ವಿಶೇಷ ಸರಕಾರಿ ಅಭಿಯೋಜಕರಿಂದ**

2. ನಾನು ಸಹ ಮೇಲ್ಕಂಡ ಯೋಜನೆಯಲ್ಲಿ ಫಲಾನುಭ ಆಗಿದ್ದರೂ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸರ್ಕಾರದಿಂದ ರೂ.20,00,000/- ಆ ಯೋಜನೆ ಅಡಿಯಲ್ಲಿ ಮಂಜೂರು ಆಗಿತ್ತು ಎಂದು ನನಗೆ ಗೊತ್ತಿದೆ ಎಂದರೆ ಸರಿಯೇಲ್ಲ.

ನಾನು ಈ ಬಗ್ಗೆ ನಿಶಾನೆ ಪಿ–51 ರಂತೆ ಲೋಕಾಯುಕ್ತ ಪೋಲಿಸರಿಗೆ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀ ಎಸ್ ಜಿ ಎನ್ ರವರಿಂದ**

3. ಏನೂ ಇಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆಃ – ಇಲ್ಲ –**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ)

ಓ.ಹೇ.ಕೇ.ಸ.ಇ.

(ಡಿ.ಎಸ್. ವಿಜಯಕುಮಾರ್)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರ ಕನ್ನಡ , ಕಾರವಾರ